ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	[illegible]
ಸದಸ್ಯರ ಹೆಸರು	ಶ್ರೀ ಎನ್.ರವಿಕುಮಾರ್
ಉತ್ತರಿಸುವ ದಿನಾಂಕ:	17.07.2019
ಉತ್ತರಿಸುವವರು	ಮುಜರಾಯಿ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು

	ಪ್ರಶ್ನೆ	ಉತ್ತರ
ಅ	ಸರ್ಕಾರವು ನೂತನವಾಗಿ ಘೋಷಿಸಿರುವ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಕಾರ್ಯ ಸೂಚಿಗಳೇನು; ಮತ್ತು ಇದರ ಸ್ವರೂಪವೇನು; ಜಿಲ್ಲಾ ಮಟ್ಟದಲ್ಲೂ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಘಟಕಗಳನ್ನು ತೆರೆಯಲಾಗುವುದೇ;	ರಾಜ್ಯದಲ್ಲಿ ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮಾಜದವರಿಗೆ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಸ್ವಯಂ ಉದ್ಯೋಗ,ಕಲ್ಯಾಣ ಮತ್ತು ಮೂಲಸೌಕರ್ಯಗಳನ್ನು ಒಳಗೊಂಡಂತೆ ಯೋಜನೆಗಳನ್ನು ರೂಪಿಸಿ, ಈ ಮೂಲಕ ಹಿಂದುಳಿದ ಬ್ರಾಹ್ಮಣ ಸಮಾಜದ ಅಭಿವೃದ್ಧಿಗೆ ಅಗತ್ಯ ಕ್ರಮಗಳನ್ನು ಹಮ್ಮಿಕೊಳ್ಳಲು ಉದ್ದೇಶಿಸಲಾಗಿದೆ. 2018-19ನೇ ಸಾಲಿನ ಆಯ-ವ್ಯಯ ಘೋಷಣೆಯಂತೆ ಸರ್ಕಾರದ ಆದೇಶ ಸಂಖ್ಯೆ:ಕಂಇ 136 ಮುಅಬಿ 2018 ದಿನಾಂಕ: 18.02.2019 ರನ್ವಯ **"ಕರ್ನಾಟಕ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯನ್ನು"** ಸ್ಥಾಪಿಸಲಾಗಿದೆ. ಈ ಮಂಡಳಿಯನ್ನು ದಿ ಕಂಪನೀಸ್ ಆಕ್ಟ್ 2013ರ ಕಲಂ 8ರಡಿಯಲ್ಲಿ ನೊಂದಾಯಿಸಲಾಗಿದೆ. ಜಿಲ್ಲಾ ಮಟ್ಟದಲ್ಲಿ **ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಘಟಕಗಳನ್ನು ಸ್ಥಾಪಿಸುವ ಪ್ರಸ್ತಾವನೆ ಇರುವುದಿಲ್ಲ.**
ಆ	ಬ್ರಾಹ್ಮಣ ಅಭಿವೃದ್ಧಿ ಮಂಡಳಿಯು ಕಾರ್ಯಾರಂಭ ಮಾಡಿದೆಯೇ; ಆಯವ್ಯಯದಲ್ಲಿ ಘೋಷಣೆಯಾಗಿ ಒಂದು ವರ್ಷ ಕಳೆದರೂ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ಕಾರ್ಯಾರಂಭ ಮಾಡದಿರಲು ಕಾರಣವೇನು;	ಮೇಲ್ಕಂಡಂತೆ ರಚಿಸಲಾದ ಕರ್ನಾಟಕ ಮಂಡಳಿಗೆ 2018-19ನೇ ಸಾಲಿನ ಆಯವ್ಯಯದಲ್ಲಿ ಒದಗಿಸಿದ ರೂ.2500.00ಲಕ್ಷಗಳ ಅನುದಾನವನ್ನು ಸರ್ಕಾರದ ಆದೇಶದ ರೀತ್ಯಾ ಮಂಡಳಿಯ ಹೆಸರಿನಲ್ಲಿ ತೆರೆಯಲಾದ ಪ್ರತ್ಯೇಕ ಬ್ಯಾಂಕ್ ಖಾತೆಯಲ್ಲಿ ಜಮಾ ಮಾಡಲಾಗಿದೆ. ಈ ಮಂಡಳಿಯನ್ನು ಕಾರ್ಯರೂಪಕ್ಕೆ ತರಲು ಸರ್ಕಾರದ ನಾಮನಿರ್ದೇಶಿತ ಸದಸ್ಯರುಗಳನ್ನು ಆಯ್ಕೆ ಮಾಡಲು ಹಾಗೂ ಅಗತ್ಯ ಅಧಿಕಾರಿ, ಸಿಬ್ಬಂದಿಗಳ ಹುದ್ದೆಗಳನ್ನು ಸೃಜಿಸುವ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯೊಂದಿಗೆ ವ್ಯವಹರಿಸಲಾಗುತ್ತಿದೆ.
ಇ	ಬ್ರಾಹ್ಮಣ ಅಭಿವೃದ್ಧಿ ಮಂಡಳಿಯು ಬ್ರಾಹ್ಮಣ ಅಭಿವೃದ್ಧಿಗೆ ಯಾವ ರೀತಿಯಲ್ಲಿ ಸಹಕರಿಸುತ್ತದೆ?	ರಾಜ್ಯದಲ್ಲಿ ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮಾಜದವರಿಗೆ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಸ್ವಯಂ ಉದ್ಯೋಗ,ಕಲ್ಯಾಣ ಮತ್ತು ಮೂಲಸೌಕರ್ಯಗಳನ್ನು ಒಳಗೊಂಡಂತೆ ಯೋಜನೆಗಳನ್ನು ರೂಪಿಸಿ, ಈ ಮೂಲಕ ಹಿಂದುಳಿದ ಬ್ರಾಹ್ಮಣ ಸಮಾಜದ ಅಭಿವೃದ್ಧಿಗೆ ಅಗತ್ಯ ಕ್ರಮಗಳನ್ನು ಹಮ್ಮಿಕೊಳ್ಳಲು ಉದ್ದೇಶಿಸಲಾಗಿದೆ.

(ಸಂಖ್ಯೆ:ಕಂಇ 30 ಮುಸಪ್ರ 2019)

(ಪಿ.ಟಿ. ಪರಮೇಶ್ವರ ನಾಯ್ಕ)
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ, ಜೀವನೋಪಾಯ
ಮತ್ತು ಮುಜರಾಯಿ ಸಚಿವರು